ಶ್ರೀ ಪಿ. ಜಿ. ಆರ್. ಸಿಂಧ್ಯ.--ಸರ್ಕಾರದ ದೃಷ್ಟಿಯಿಂದಲೂ ಹಾಗೂ ನನ್ನ ಅಭಿಪ್ರಾಯದ ಪ್ರಕಾರ ಈ ರಸ್ತೆ ಸಾರಿಗೆ ನಿಗಮವನ್ನು ೪ ವಿಭಾಗಗಳನ್ನಾಗಿ ಮಾಡುವುದು ಸೂಕ್ತವಾಗಿದೆ. ಆದರೆ ಈ ವರ್ಷವೇ ಇದನ್ನು ಮಾಡಬೇಕೆಂದು ಕಷ್ಟವಾಗುತ್ತದೆ. ಹಣಕಾಸಿನ ಪರಿಸ್ಥಿತಿಯನ್ನು ನೋಡಿಕೊಂಡು ನಂತರ ಈ ವರ್ಷವೇ ಬಿ.ಟಿ.ಎಸ್.ನ್ನು ಕೆ.ಎಸ್.ಆರ್.ಟಿ.ಸಿ.ಯಿಂದ ವಿಂಗಡಿಸಿ ಮಾಡಬೇಕು ಎನ್ನುವ ಅಭಿಪ್ರಾಯ ಸರ್ಕಾರದ ಪರಿಶೀಲನೆಯಲ್ಲಿದೆ.

ಅಧ್ಯಕ್ಷರು.— ಶ್ರೀ ಕೆ. ಹೆಚ್. ಪಾಟೀಲರ ಪ್ರಶ್ನೆಯನ್ನು ಕ್ಯಾರಿ ಓವರ್ ಮಾಡಲಾಗಿದೆ.

ರೋಣ ತಾಲ್ಲೂಕಿನ ಸೂಡಿ ಹಾಗೂ ನಿಡಗುಂದಿ ಗ್ರಾಮಗಳಲ್ಲಿ ಬಸ್ ನಿಲ್ದಾಣ ನಿರ್ಮಿಸುವ ಬಗ್ಗೆ

೧೯೩೧. ಶ್ರೀ ಜ್ಞಾನದೇವ ದೊಡ್ಡಮೇಟಿ, (ರೋಣ). --ಮಾನ್ಯ ಸಾರಿಗೆ ಮತ್ತು ವಸತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೇ?

ಅ) ರೋಣ ತಾಲ್ಲೂಕಿನ ಸೂಡಿ ಹಾಗೂ ನಿಡಗುಂದಿ ಗ್ರಾಮಗಳಲ್ಲಿ ಬಸ್ ನಿಲ್ದಾಣ ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆಯೇ?

ಆ) ಹಾಗಿದ್ದಲ್ಲಿ, ಸೂಡಿ ಹಾಗೂ ನಿಡಗುಂದಿಗಳಲ್ಲಿ ಬಸ್ ನಿಲ್ದಾಣದ ನಿರ್ಮಾಣ ಕಾರ್ಯ ಯಾವಾಗಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಪಿ. ಜಿ. ಆರ್. ಸಿಂಧ್ಯ (ಸಾರಿಗೆ ಹಾಗೂ ವಸತಿ ರಾಜ್ಯ ಸಚಿವರು,)

ಅ) ಹೌದು.

ಆ) ಸೂಡಿ ಗ್ರಾಮದಲ್ಲಿ ಬಸ್ ನಿಲ್ದಾಣ ನಿರ್ಮಾಣ ಕಾರ್ಯವನ್ನು ೧೯೮೬-೮೭ನೇ ಸಾಲಿನ ಪರಿಷ್ಕೃತ ಆಯವ್ಯಯ ಪಟ್ಟಿಯಲ್ಲಿ ಸೇರಿಸಲು ಕ್ರಮ ಕೈಗೊಳ್ಳಲಾಗುವುದು. ನಿಡಗುಂದಿಯಲ್ಲಿ ದೊಡ್ಡ ನಿವೇಶನವನ್ನು ವಶಪಡಿಸಿಕೊಂಡ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಶ್ರೀ ಜಿ. ಎಸ್. ದೊಡ್ಡಮೇಟಿ.—ಮಾನ್ಯ ಅಧ್ಯಕ್ಷರೇ, ಸೂಡಿ ಮತ್ತು ನಿಡುಗುಂದಿ ಗ್ರಾಮಗಳಲ್ಲಿ ಬಸ್ ಸ್ಟಾಂಡ್ ಕಟ್ಟಿಸುವ ಬಗ್ಗೆ ಹಿಂದಿನ ಮಾನ್ಯ ಸಚಿವರಾದ ಶ್ರೀ ಎಂ. ಪಿ. ಪ್ರಕಾಶ್‌ರವರು ೫-೧೦-೮೪ ರಂದೇ ಮುಂಜೂರಾತಿಯನ್ನು ಕೊಟ್ಟಿದ್ದರು. ಆದರೆ ಇದುವರೆಗೂ ಇದನ್ನು ಆಯವ್ಯಯ ಪಟ್ಟಿಯಲ್ಲಿ ಸೇರಿಸಿಲ್ಲ. ಮಾನ್ಯ ಸಚಿವರು ಇದನ್ನು ಈ ವರ್ಷದ ಆಯವ್ಯಯ ಪಟ್ಟಿಯಲ್ಲಿ ಕೊಟ್ಟಿದ್ದರು. ಆದುದರಿಂದ ಮುಂದಿನ ವರ್ಷದ ಆಯವ್ಯಯದ ಪಟ್ಟಿಯಲ್ಲಾದರೂ ಈ ಕೆಲಸವನ್ನು ಸೇರಿಸುವುದಾಗಿ ವಚನವನ್ನು ಸೇರಿಸಿಕೊಂಡು ಇದನ್ನು ಆದಷ್ಟು ತ್ವರಿತವಾಗಿ ಮುಗಿಸುತ್ತಾರೆಯೇ?

ಶ್ರೀ ಪಿ. ಜಿ. ಆರ್. ಸಿಂಧ್ಯ.—ಮಾನ್ಯ ಸದಸ್ಯರು ಹೇಳಿದ ವಿಷಯದ ಬಗ್ಗೆ ನಾನು ಪರಿಶೀಲನೆ ಮಾಡುತ್ತೇನೆ.

ಕೆ.ಐ.ಎ.ಡಿ.ಬಿ. ನಲ್ಲಿ ಸಿಬ್ಬಂದಿಯ ಸಂಖ್ಯೆ ಕುರಿತು.

೧೯೮೬. ಶ್ರೀ ಬಿ. ಆರ್. ನೀಲಕಂಠಪ್ಪ (ತರೀಕೆರೆ).—ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕರ್ನಾಟಕ ಪ್ರದೇಶದ ಕೈಗಾರಿಕಾ ಅಭಿವೃದ್ಧಿ ಮಂಡಳಿಯಲ್ಲಿ ಎ. ಬಿ. ಸಿ. ಡಿ. ವರ್ಗದ ಸಿಬ್ಬಂದಿಯ ಸಂಖ್ಯೆ ಎಷ್ಟು ?

ಆ) ಈ ಸಿಬ್ಬಂದಿಯಲ್ಲಿ ಅನುಸೂಚಿತ ವರ್ಗ ಹಾಗೂ ಇತರೆ ವರ್ಗಕ್ಕೆ ಸೇರಿರುವ ಸಂಖ್ಯೆ ಎಷ್ಟು ?

ಇ) ಸರ್ಕಾರಿ ನೇಮಕಾತಿ ಆದೇಶದ ಪ್ರಕಾರ ಇವರ ನೇಮಕಾತಿಯಾಗಿದೆಯೇ ?

ಈ) ಹಾಗಿಲ್ಲದಿದ್ದಲ್ಲಿ, ಆ ಬಗ್ಗೆ ತೆಗೆದುಕೊಂಡ ಕ್ರಮಗಳೇನು ?